ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್,
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಕಚೇರಿ,
ಲೋಕೋಪಯೋಗಿ ಕಟ್ಟಡ ಸಂಕೀರ್ಣ,
ನೆಹರೂ ಮೈದಾನ ರಸ್ತೆ, ದಕ್ಷಿಣ ಕನ್ನಡ,
ಮಂಗಳೂರು - ೫೭೫೦೦೧.
ದೂರವಾಣಿ ಸಂಖ್ಯೆ: ೦೮೨೪-೨೪೨೩೬೭೨

ಕರ್ನಾಟಕ ಸರ್ಕಾರ

D.K.Zilla Panchayath,
District Health & Family Welfare Office,
PWD Building Complex, Nehru Maidan Road,
Dakshina Kannada, Mangalore – 575001
Contact No : 0824-2423672
Email ID : dhodkannada2019@gmail.com

ಸಂಖ್ಯೆ : ಸಿ(2)ಪಿ.ಆರ್.ಎಂ/ಲ್ಯಾಬ್/44/2026–27

ದಿನಾಂಕ: 07–07–2026

# ಪತ್ರಿಕಾ ಪ್ರಕಟಣೆ

ದಕ್ಷಿಣ ಕನ್ನಡ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಮಂಜೂರಾಗಿ ಖಾಲಿ ಇರುವ ಕಿರಿಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಹಾಗೂ ಫಾರ್ಮಸಿ ಅಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿಯನ್ನು ಒಂದು ವರ್ಷದ ಅವಧಿಗೆ ನೇಮಕಾತಿ ಮಾಡಿಕೊಳ್ಳುವ ಬಗ್ಗೆ ಮಾನ್ಯ ಆಯುಕ್ತರು ಆ.ಕು.ಕ ಸೇವೆಗಳು ಬೆಂಗಳೂರು ಇವರ ಪತ್ರ ಸಂಖ್ಯೆ: ಇ–ಆಫೀಸ್ 1840947 ದಿ :15–06–2026 ರ ಆದೇಶದಲ್ಲಿ ಅನುಮತಿ ದೊರಕಿದ್ದು, ಅದರಂತೆ ಅರ್ಹ ಆಸಕ್ತಿ ಅಭ್ಯರ್ಥಿಗಳು dkhfw.in ವೆಬ್‌ಸೈಟ್‌ನಲ್ಲಿ ಅರ್ಜಿ ನಮೂನೆಯನ್ನು ಪಡೆದುಕೊಂಡು ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ಭರ್ತಿ ಮಾಡಿ ದಿನಾಂಕ: 15–07–2026 ರ ಸಾಯಂಕಾಲ 05.30 ಗಂಟೆಯೊಳಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಕಚೇರಿಗೆ ಅರ್ಜಿಯನ್ನು ಸಲ್ಲಿಸುವುದು. ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು dkhfw.in ವೆಬ್‌ಸೈಟ್‌ನಲ್ಲಿ ಪ್ರಕಟಿಸಿ 1 : 2 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು.

| ಕ್ರ.ಸಂ. | ವಿವರ | ಖಾಲಿ ಹುದ್ದೆಗಳ ವಿವರ | ವಿದ್ಯಾರ್ಹತೆ | ಮಾಸಿಕ ಸಂಚಿತ ವೇತನ |
|---|---|---|---|---|
| 1 | ಕಿರಿಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ | 22 | ಡಿಪ್ಲೋಮಾ ಇನ್ ಲ್ಯಾಬೋರೇಟರಿ ತಾಂತ್ರಿಕ ವಿದ್ಯಾರ್ಹತೆಯನ್ನು ಕರ್ನಾಟಕ ಸರಕಾರದಿಂದ ಮಾನ್ಯತೆ ಪಡೆದ ಶಾಲೆಗಳಲ್ಲಿ ಮಾತ್ರ ಪಡೆದಿರಬೇಕು. | ಕಾರ್ಮಿಕ ಇಲಾಖೆ ನಿಗದಿಪಡಿಸಿರುವ ಕನಿಷ್ಠ ವೇತನ |
| 2 | ಫಾರ್ಮಸಿ ಅಧಿಕಾರಿ | 11 | ಡಿ ಫಾರ್ಮಾ ವಿದ್ಯಾರ್ಹತೆಯನ್ನು ಕರ್ನಾಟಕ ಸರಕಾರದಿಂದ ಮಾನ್ಯತೆ ಪಡೆದ ಶಾಲೆಗಳಲ್ಲಿ ಮಾತ್ರ ಪಡೆದಿರಬೇಕು ಹಾಗೂ ಡಿ ಫಾರ್ಮಾ ಅಭ್ಯರ್ಥಿಗಳು ಕರ್ನಾಟಕ ಫಾರ್ಮಸಿ ಕೌನ್ಸಿಲ್ ಕಡ್ಡಾಯವಾಗಿ ನೋಂದಣಿಯಾಗಿರಬೇಕು. | |

**ಕಿರಿಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಹುದ್ದೆಗೆ ಸಲ್ಲಿಸಬೇಕಾದ ದಾಖಲೆಗಳು :–**

ಎಸ್.ಎಸ್.ಎಲ್.ಸಿ ಅಂಕಪಟ್ಟಿ,
ಡಿಪ್ಲೋಮಾ ಇನ್ ಲ್ಯಾಬೋರೇಟರಿ (DMLT) ಅಂಕಪಟ್ಟಿಗಳು,
ಪ್ಯಾರಾಮೆಡಿಕಲ್ ಬೋರ್ಡ್ ನೋಂದಣಿ ಪ್ರಮಾಣ ಪತ್ರ
ಜಾತಿ ಪ್ರಮಾಣ, ಕನ್ನಡ ಭಾಷಾ ಪ್ರಮಾಣ ಪತ್ರ, ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ,
ಅಂಗವಿಕಲರಾಗಿದ್ದಲ್ಲಿ ಪ್ರಮಾಣ ಪತ್ರ
ಆಧಾರ್‌ಕಾರ್ಡ್
ಸ್ವಯಂ ದೃಢೀಕರಿಸಿ ಸಲ್ಲಿಸುವುದು.

**ಫಾರ್ಮಸಿ ಅಧಿಕಾರಿ ಹುದ್ದೆಗೆ ಸಲ್ಲಿಸಬೇಕಾದ ದಾಖಲೆಗಳು :–**

ಎಸ್.ಎಸ್.ಎಲ್.ಸಿ ಅಂಕಪಟ್ಟಿ,
ಡಿ ಫಾರ್ಮಾ ಅಂಕಪಟ್ಟಿಗಳು,
ಕರ್ನಾಟಕ ಫಾರ್ಮಸಿ ಕೌನ್ಸಿಲ್ ನೋಂದಣಿ ಪ್ರಮಾಣ ಪತ್ರ
ಜಾತಿ ಪ್ರಮಾಣ, ಕನ್ನಡ ಭಾಷಾ ಪ್ರಮಾಣ ಪತ್ರ, ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ,
ಅಂಗವಿಕಲರಾಗಿದ್ದಲ್ಲಿ ಪ್ರಮಾಣ ಪತ್ರ
ಆಧಾರ್‌ಕಾರ್ಡ್
ಸ್ವಯಂ ದೃಢೀಕರಿಸಿ ಸಲ್ಲಿಸುವುದು.

**ಸೂಚನೆ :** ನೇಮಕಾತಿಯನ್ನು ರೋಸ್ಟರ್ ಮತ್ತು ಮೆರಿಟ್ ನಿಯಮಗಳನ್ನು ಅನುಸರಿಸಿ ಮಾಡಲಾಗುವುದು.

**ವಯೋಮಿತಿ:** ಅಭ್ಯರ್ಥಿಗಳು 45 ವರ್ಷ ಮೀರಿರಬಾರದು.

**ಷರಾ : ಮೀಸಲಿರಿಸಿದ ವರ್ಗದಲ್ಲಿ ಅಭ್ಯರ್ಥಿಯು ಲಭ್ಯವಿಲ್ಲದ್ದಲ್ಲಿ ಮುಂದಿನ ರೋಸ್ಟರ್ ಬಿಂದುವಿನ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು.**

**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ,**
**ದಕ್ಷಿಣ ಕನ್ನಡ ಜಿಲ್ಲೆ**